

ಕೇಂದ್ರದ ವಿದ್ಯಾರ್ಥಿಗಳೊಂದಿಗೆ ಸಂಸ್ಥೆಯ ಅಧ್ಯಕ್ಷ ಡಾ. ಎಂ ಮೋಹನ್ ಆಳ್ವರು



ಅಂತರ್ಕಾಲೇಜು ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಕೇಂದ್ರಕ್ಕೆ ಸಮಗ್ರ ಪ್ರಶಸ್ತಿ


ಸಂಸ್ಕೃತಿ ಅಧ್ಯಯನ ಕೇಂದ್ರ
ರಂಗ್ 2018

# ಆಳ್ವಾಸ್ ತುಳು ರಂಗ್ ಸಾಂಸ್ಕೃತಿಕ ಸ್ಪರ್ಧೆ

## ಶಿಕ್ಷಣ ಪ್ರತಿಷ್ಠಾನದ ಟ್ರಸ್ಟಿ ವಿವೇಕ ಆಳ್ವ ಅವರಿಂದ ಚಾಲನೆ



ಆಳ್ವಾಸ್ ಕಾಲೇಜಿನಲ್ಲಿ ತುಳು ರಂಗ್ ಅಂತರ್ ಕಾಲೇಜು ತುಳು ಸಾಂಸ್ಕೃತಿಕ ಸ್ಪರ್ಧೆಗೆ ಚಾಲನೆ ನೀಡಲಾಯಿತು.

■ ವಿಜಯವಾಣಿ ಸುದ್ದಿಜಾಲ ಮೂಡುಬಿದಿರೆ

ಭಾಷೆ ನಾಶವಾಗುತ್ತದೆ ಎಂಬುದು ಭ್ರಮೆ. ಮನೆಯಲ್ಲಿ, ಒಡನಾಡಿಗಳಲ್ಲಿ ತುಳುವಿನಲ್ಲೇ ಮಾತನಾಡುವ ಮನೋಭಾವ ಬೆಳೆಸಬೇಕು. ಆಗ ಮಾತ್ರ ನಮ್ಮಲ್ಲಿ ಆಪ್ತತೆ ಮೂಡುತ್ತದೆ. ಮನೆಯ ಹಿರಿಯರ ಅಂತರಂಗಕ್ಕೆ ಹತ್ತಿರವಾಗುತ್ತೇವೆ ಎಂದು ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಟ್ರಸ್ಟಿ ವಿವೇಕ ಆಳ್ವ ಹೇಳಿದರು.

ಮೂಡುಬಿದಿರೆ ವಿದ್ಯಾಗಿರಿಯ ಕುವೆಂಪು ಸಭಾಂಗಣದಲ್ಲಿ ನಡೆದ ಅಂತರ್ ಕಾಲೇಜು ತುಳು ಸಾಂಸ್ಕೃತಿಕ ಸ್ಪರ್ಧೆ ಮತ್ತು ಪ್ರದರ್ಶನ ಮೇಳ ಆಳ್ವಾಸ್ ತುಳು ರಂಗ್ 2018 ಸೇರಿಗೆ ಭತ್ತ ತುಂಬಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಂಶುಪಾಲ ಪ್ರೊ.ಕುರಿಯನ್, ತುಳು ಸಂಸ್ಕೃತಿಯಲ್ಲಿ ಎಲ್ಲರನ್ನೂ ಒಳಗೊಳ್ಳುವ ಗುಣವಿದೆ. ತುಳುವರ ಪ್ರಕೃತಿ ಆರಾಧನೆಯ ಸಂಸ್ಕೃತಿ ಇಂದು ಇನ್ನಷ್ಟು ಪ್ರಸ್ತುತ ಎಂದರು.

ತುಳು ಅಧ್ಯಯನ ಕೇಂದ್ರ ಸಂಯೋಜಕ ಡಾ.ಯೋಗೀಶ ಕೈರೋಡಿ ಉಪಸ್ಥಿತರಿದ್ದರು. ಮೈತ್ರಿ ಸ್ವಾಗತಿಸಿದರು. ಸಯ್ಯದ್ ವಂದಿಸಿದರು. ಹರ್ಷಿತಾ ಕಾರ್ಯಕ್ರಮ ನಿರೂಪಿಸಿದರು. ಬಳಿಕ ತುಳು ಸಂಸ್ಕೃತಿ ಅನಾವರಣ ಮಾಡುವ ವಿವಿಧ ಸ್ಪರ್ಧೆ-ಪ್ರದರ್ಶನಗಳೂ ನಡೆದವು.

ಉದಯವಾಣಿ

▸▸ 'ಆಳ್ವಾಸ್ ತುಳು ರಂಗ್' ಸಾಂಸ್ಕೃತಿಕ ಸ್ಪರ್ಧೆ

# ಬಳಕೆಯಿಂದ ಭಾಷೆಯ ಉಳಿವು: ವಿವೇಕ್ ಆಳ್ವ



ವಿವೇಕ ಆಳ್ವ ಅವರು 'ಆಳ್ವಾಸ್ ತುಳು ರಂಗ್ 2018'ಅನ್ನು ಉದ್ಘಾಟಿಸಿದರು.

**ಮೂಡಬಿದಿರೆ,** ಮಾ. 31: ತುಳುವರು ತಮ್ಮ ಮನೆಯಲ್ಲಿ, ಒಡನಾಡಿಗಳಲ್ಲಿ ತುಳುವಿನಲ್ಲೇ ಮಾತನಾಡುವ ಮನೋಭಾವ ಬೆಳೆಸಬೇಕು. ತುಳುವಿನಲ್ಲಿ ಮಾತನಾಡಿದಾಗ ಮಾತ್ರ ನಮ್ಮಲ್ಲಿ ಆಪ್ತತೆ ಮೂಡುತ್ತದೆ. ಮನೆಯ ಹಿರಿಯರ ಅಂತರಂಗಕ್ಕೆ ಹತ್ತಿರವಾಗುತ್ತೇವೆ. ಭಾಷೆ ಬಳಸಿದರೆ ಮಾತ್ರ ಉಳಿಯುವುದು ಎಂದು ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಟ್ರಸ್ಟಿ ವಿವೇಕ ಆಳ್ವ ಹೇಳಿದರು.

ಮೂಡಬಿದಿರೆ ವಿದ್ಯಾಗಿರಿಯ ಕುವೆಂಪು ಸಭಾಂಗಣದಲ್ಲಿ ಶನಿವಾರ ನಡೆದ 'ಆಳ್ವಾಸ್ ತುಳು ರಂಗ್ 2018' ಅಂತರ್ ಕಾಲೇಜು ತುಳು ಸಾಂಸ್ಕೃತಿಕ ಸ್ಪರ್ಧೆ ಮತ್ತು ವಂತ ಪ್ರದರ್ಶನ ಮೇಳವನ್ನು ಸೇರಿಗೆ ಭತ್ತ ತುಂಬಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಕಾಲೇಜಿನ ಪ್ರಾಂಶುಪಾಲ ಪ್ರೊ| ಕುರಿಯನ್ ಅಧ್ಯಕ್ಷತೆ ವಹಿಸಿ ಮಾತನಾಡಿ, ತುಳು ಸಂಸ್ಕೃತಿಯಲ್ಲಿ ಎಲ್ಲರನ್ನೂ ಒಳಗೊಳ್ಳುವ ಗುಣವಿದೆ. ತುಳುವರ ಪ್ರಕೃತಿ ಆರಾಧನೆಯ ಸಂಸ್ಕೃತಿ ಇಂದು ಇನ್ನಷ್ಟು ಪ್ರಸ್ತುತವಾಗುತ್ತಿದೆ ಎಂದರು.

ತುಳು ಅಧ್ಯಯನ ಕೇಂದ್ರದ ಸಂಯೋಜಕ ಡಾ| ಯೋಗೀಶ ಕೈರೋಡಿ ಉಪಸ್ಥಿತರಿದ್ದರು.

ಮೈತ್ರಿ ಸ್ವಾಗತಿಸಿದರು. ಸಯ್ಯದ್ ವಂದಿಸಿದರು. ಹರ್ಷಿತಾ ಕಾರ್ಯಕ್ರಮ ನಿರೂಪಿಸಿದರು.

### ಸಾಂಸ್ಕೃತಿಕ ಸ್ಪರ್ಧೆ

ತುಳು ಸಂಸ್ಕೃತಿಯನ್ನು ಅನಾವರಣ ಮಾಡುವ ಪದರಂಗಿತ, ಪಾತೆರಕತೆ, ಸಬಿ ಸವಾಲ್, ನಾಟ್ಯ ನಟನೆ ಮೊದಲಾದ ಸ್ಪರ್ಧೆ ಗಳನ್ನು ಹಾಗೂ ಪ್ರಶಂಸ ಕಾಪು ತಂಡದಿಂದ 'ಬಲೇ ತೆಲಿಪುಲೆ' ಪ್ರದರ್ಶನವನ್ನು ಏರ್ಪಡಿಸಲಾಗಿತ್ತು.

### ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಟ್ರಸ್ಟಿ ವಿವೇಕ ಆಳ್ವ

# ತುಳು ಭಾಷೆ ನಾಶ ಕೇವಲ ಭ್ರಮೆ



ಮೂಡುಬಿದಿರೆಯ ಆಳ್ವಾಸ್ ಕಾಲೇಜಿನಲ್ಲಿ ಶನಿವಾರ ನಡೆದ ಅಂತರ ಕಾಲೇಜ್ ತುಳು ಸಾಂಸ್ಕೃತಿ ಸ್ಪರ್ಧೆಯನ್ನು ವಿವೇಕ್ ಆಳ್ವ ಉದ್ಘಾಟಿಸಿದರು.

ಪ್ರಜಾವಾಣಿ ವಾರ್ತೆ

ಮೂಡುಬಿದಿರೆ: ಭಾಷೆ ನಾಶವಾಗುತ್ತದೆ ಎಂಬುದು ಭ್ರಮೆ. ಮನೆಯಲ್ಲಿ, ಒಡನಾಡಿಗಳಲ್ಲಿ ತುಳುವಿನಲ್ಲೇ ಮಾತನಾಡುವ ಮನೋಭಾವ ಬೆಳೆಸಬೇಕು. ತುಳು ಬಳಸಿದರೆ ಭಾಷೆ ಉಳಿಯುತ್ತದೆ ಎಂದು ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಟ್ರಸ್ಟಿ ವಿವೇಕ ಆಳ್ವ ಹೇಳಿದರು.

ಮೂಡುಬಿದಿರೆ ವಿದ್ಯಾಗಿರಿಯ ಕುವೆಂಪು ಸಭಾಂಗಣದಲ್ಲಿ ನಡೆದ ಅಂತರ ಕಾಲೇಜು ತುಳು ಸಾಂಸ್ಕೃತಿಕ ಸ್ಪರ್ಧೆ ಮತ್ತು ಪ್ರದರ್ಶನ ಮೇಳ 'ಆಳ್ವಾಸ್ ತುಳು ರಂಗ 2018' ಅನ್ನು ಸೇರಿಗೆ ಭತ್ತ ತುಂಬಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ತುಳುವಿನಲ್ಲಿ ಮಾತನಾಡಿದಾಗ ಮಾತ್ರ ನಮ್ಮಲ್ಲಿ ಆಪ್ತತೆ ಮೂಡುತ್ತದೆ. ಮನೆಯ ಹಿರಿಯರ ಅಂತರಂಗಕ್ಕೆ ಹತ್ತಿರವಾಗುತ್ತೇವೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಪ್ರೊ.ಕುರಿಯನ್ ಮಾತನಾಡಿ, ತುಳು ಸಂಸ್ಕೃತಿಯಲ್ಲಿ ಎಲ್ಲರನ್ನೂ ಒಳಗೊಳ್ಳುವ ಗುಣವಿದೆ. ತುಳುವರ ಪ್ರಕೃತಿ ಆರಾಧನೆಯ ಸಂಸ್ಕೃತಿ ಇಂದು ಇನ್ನಷ್ಟು ಪ್ರಸ್ತುತ ಎಂದರು.

ತುಳು ಅಧ್ಯಯನ ಕೇಂದ್ರದ ಸಂಯೋಜಕ ಡಾ.ಯೋಗೀಶ ಕೈರೋಡಿ ಉಪಸ್ಥಿತರಿದ್ದರು. ಮೈತ್ರಿ ಸ್ವಾಗತಿಸಿದರು. ಸಯ್ಯದ್ ವಂದಿಸಿದರು. ಹರ್ಷಿತಾ ನಿರೂಪಿಸಿದರು.

ಬಳಿಕ ತುಳು ಸಂಸ್ಕೃತಿಯನ್ನು ಅನಾವರಣ ಮಾಡುವ ವಿವಿಧ ಸ್ಪರ್ಧೆ-ಪ್ರದರ್ಶನಗಳು ನಡೆದವು.